## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿಬಿಎಂಪಿ ವ್ಯಾಪ್ತಿಯ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 9 ಮತ್ತು 11ರ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ ರೂ.10.00 ಕೋಟಿಗಳ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆಯುಕ್ತರು/ಪಿಆರ್/1930/2021-22, ದಿನಾಂಕ: 07-08-2021.
2. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆಯುಕ್ತರು/ಪಿಆರ್/1931/2021-22, ದಿನಾಂಕ: 07-08-2021.
3. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
4. ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ: 08-02-2022.
5. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (5).
6. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆ/ಪಿಆರ್(ಜಿ)/4562/2021-22, ದಿನಾಂಕ: 18-03-2022.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 21-04-2022 ರಂದು ನಡೆದ ಸಭೆ.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ಮತ್ತು (2)ರಲ್ಲಿ ಓದಲಾದ ದಿನಾಂಕ: 07-08-2021ರ 2 ಪತ್ರಗಳಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವಾರ್ಡ್-9 ವ್ಯಾಪ್ತಿಯಲ್ಲಿ ಬಿಇಎಲ್ ಬಡಾವಣೆ, ಹೆಚ್.ಎಂ.ಟಿ ಬಡಾವಣೆ, ಡಿಫೆನ್ಸ್ ಬಡಾವಣೆ, ಎನ್.ಐ.ಟಿ ಬಡಾವಣೆ ತಿಂಡ್ಲು, ವಿರೂಪಾಕ್ಷಪುರ ಹಾಗೂ ಇತರೆ ಬಡಾವಣೆಗಳು ಮತ್ತು ವಾರ್ಡ್-10ರ ಎಂ.ಎಸ್. ಪಾಳ್ಯ, ಶ್ರೀನಿಧಿ ಬಡಾವಣೆ, ಬಾಲಾಜಿ ಬಡಾವಣೆ, ವರದರಾಜನಗರ, ವಿನಾಯಕ ನಗರ, ಟೀಚರ್ಸ್ ಬಡಾವಣೆ, ಕಳತ್ತೂರು ಬಡಾವಣೆ, ಮಾರಿಯಮ್ಮ ಬ್ಲಾಕ್, ರಘುರಾಮ್ ಬಡಾವಣೆ, ಗಂಗಮ್ಮ ಗುಡಿ ಹಾಗೂ ಇತರೆ ಬಡಾವಣೆಗಳ ಚರಂಡಿಗಳಲ್ಲಿ ಹೂಳು ತುಂಬಿದ್ದು, ಪ್ರಸ್ತುತ ಮಳೆಗಾಲವಾಗುವುದರಿಂದ ಮಳೆಯ ನೀರು ಸರಾಗವಾಗಿ ಹರಿಯದೇ ರಸ್ತೆಗಳ ಮೇಲೆ ಹರಿಯುತ್ತಿದ್ದು, ರಸ್ತೆಗಳು ಬಹಳಷ್ಟು ಹಾಳುಗಿರುತ್ತದೆ. ಈ ಸಂಬಂಧ ಅಲ್ಲಿನ ಜನ ಪ್ರತಿನಿಧಿಗಳು ವಾರ್ಡ್ ನ ಅಭಿವೃದ್ಧಿಗಾಗಿ ಸರ್ಕಾರದ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ 07 ಕಾಮಗಾರಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೈಗೊಳ್ಳಬೇಕಾಗಿರುತ್ತದೆ. ಆದುದರಿಂದ, ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ" ಯಡಿ ರೂ.10.00 ಕೋಟಿಗಳ ಅನುದಾನ ಮಂಜೂರು ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ

ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 08-02-2022ರ ಸರ್ಕಾರದ ಪತ್ರದಲ್ಲಿ, ಮುಖ್ಯ ಆಯುಕ್ತರ ದಿನಾಂಕ: 03-08-2021ರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಇತ್ತೀಚೆಗೆ ಅನುಮೋದನೆ ನೀಡಿರುವ "ಅಮೃತ ನಗರೋತ್ಥಾನ ಯೋಜನೆ"ಯ ಕ್ರಿಯಾ ಯೋಜನೆಯಲ್ಲಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಕಾಮಗಾರಿಗಳನ್ನು ಸೇರ್ಪಡೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರಿಗೆ ಪತ್ರ ಬರೆಯಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (5) ರಲ್ಲಿ ಓದಲಾದ ದಿನಾಂಕ: 25-02-2022 (5) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ರೂ.75.00 ಕೋಟಿಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (6) ರಲ್ಲಿ ಓದಲಾದ ದಿನಾಂಕ: 18-03-2022ರ ಪತ್ರದಲ್ಲಿ ಮುಖ್ಯ ಆಯುಕ್ತರು ಬಿಬಿಎಂಪಿ ರವರು ಬಿಬಿಎಂಪಿ ಯಲಹಂಕ ವಲಯದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಾರ್ಡ್-09ರ ವ್ಯಾಪ್ತಿಯಲ್ಲಿನ ಬಿಇಎಲ್ ಬಡಾವಣೆ, ಹೆಚ್.ಎಂ.ಟಿ ಬಡಾವಣೆ, ಡಿಫೆನ್ಸ್ ಬಡಾವಣೆ, ಎನ್.ಟಿ.ಐ ಬಡಾವಣೆ, ತಿಂಡ್ಲು, ವಿರೂಪಾಕ್ಷಪುರ ಹಾಗೂ ಇತರೆ ಬಡಾವಣೆಗಳು ಮತ್ತು ವಾರ್ಡ್-11ರ ಎಂ.ಎಸ್ ಪಾಳ್ಯ, ಶ್ರೀನಿಧಿ ಬಡಾವಣೆ, ಬಾಲಾಜಿ ಬಡಾವಣೆ, ವರದರಾಜನಗರ, ವಿನಾಯಕ ನಗರ, ಟೀಚರ್ಸ್ ಬಡಾವಣೆ, ಕಳತ್ತೂರು ಬಡಾವಣೆ, ಮಾರಿಯಮ್ಮ ಬ್ಲಾಕ್, ರಘುರಾಮ್ ಬಡಾವಣೆ, ಗಂಗಮ್ಮ ಬಡಾವಣೆ ಹಾಗೂ ಇತರೆ ಬಡಾವಣೆಗಳ ಚರಂಡಿ ಮತ್ತು ರಸ್ತೆಗಳ ಅಭಿವೃದ್ಧಿಗಾಗಿ ಈ ಕೆಳಕಂಡ 07 ಕಾಮಗಾರಿಗಳನ್ನು ಕೈಗೊಳ್ಳುವುದು ಅತೀಅವಶ್ಯಕವಾಗಿರುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

| Sl. No. | Ward No | Name of Work | Estimate Cost (Rs. In Lakhs) |
|---|---|---|---|
| 1 | 09 | Improvements to roads, Drains and Footpath at 1st Block 5th, 6th BEL layout main road and cross roads in ward no-09 (Vidyaranyapura) | 100.00 |

..3/-

| | | | |
|---|---|---|---|
| 2 | 09 | Improvements to roads, Drains and Footpath at 4th, 5th, 6th Block HMT Layout main road and Cross roads in ward no-09 (Vidyaranyapura) | 100.00 |
| 3 | 09 | Improvements to roads, drains and Footpath at IECHS layout, Basavasamithi, Sapthagiri layout main road and Cross roads in ward no-09 | 100.00 |
| 4 | 09 | Improvements to roads and drains at Narasipura defence layout, NTI layout main road and Cross roads in ward no-09 (Vidyaranyapura) | 100.00 |
| 5 | 09 | Improvements to roads and drains at Virupakshapura, Thindlu road and Cross roads in ward no-09 (Vidyaranyapura) | 100.00 |
| 6 | 11 | Improvements to roads and drains at Mariyamma Block, Raghuram layout, Gangamma Gudi Kalathur layout and surrounding areas in ward no-11 (Kuvempunagara) | 200.00 |
| 7 | 11 | Improvements to Balance Roads and drains at MS playa Srinidhi layout, Balaji Layout Techers layout varadarajanagara, Vinayakanagara and surrounding areas in ward no-11 (Kuvempunagara) | 300.00 |
| | | **Total** | **1000.00** |

ಈ ಬಗ್ಗೆ, ದಿನಾಂಕ: 07-08-2021ರ ಪತ್ರದಲ್ಲಿ ಅನುದಾನವನ್ನು ಮಂಜೂರು ಮಾಡಲು ಕೋರಲಾಗಿದ್ದು, ದಿನಾಂಕ: 08-02-2022 ರಂತೆ ಪ್ರಸ್ತಾಪಿಸಿರುವ ಕಾಮಗಾರಿಗಳನ್ನು ಅಮೃತ ನಗರೋತ್ಥಾನ ಯೋಜನೆಯ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಗೊಳಿಸಲು ನಿರ್ದೇಶಿಸಲಾಗಿರುತ್ತದೆ. ಈಗಾಗಲೇ ಮಾನ್ಯ ಶಾಸಕರು ರೂ.75.00 ಕೋಟಿಗೆ ಕ್ರಿಯಾ ಯೋಜನೆಯನ್ನು ಸಕ್ಷಮ ಪ್ರಾಧಿಕಾರಕ್ಕೆ ಮಂಜೂರಾತಿಗೆ ಸಲ್ಲಿಸಿದ್ದು, ಮೇಲ್ಕಂಡ ಕಾಮಗಾರಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೈಗೊಳ್ಳಲು ಹೆಚ್ಚುವರಿಯಾಗಿ ರೂ.1000.00 ಲಕ್ಷಗಳ ಅನುದಾನವನ್ನು ಸರ್ಕಾರದಿಂದ ಮಂಜೂರು ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (7) ರಲ್ಲಿ ಓದಲಾದ ದಿನಾಂಕ: 21-04-2022ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ" ಯಡಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ನಿಗಧಿಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ಇವರು ಸಲ್ಲಿಸಿರುವ ಕ್ರಿಯಾ ಯೋಜನೆಯನ್ನು ಅಂತಿಮಗೊಳಿಸುವ ಬಗ್ಗೆ ನಡೆದ ಸಭೆಯಲ್ಲಿ

...4/-

ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.9 ಮತ್ತು 11ರ ವ್ಯಾಪ್ತಿಯಲ್ಲಿ ಬರುವ ವಿವಿಧ ರಸ್ತೆ ಮತ್ತು ಚರಂಡಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಸ್ತುತ ನಿಗಧಿಪಡಿಸಿರುವ ರೂ.75.00 ಕೋಟಿಗಳ ಅನುದಾನವನ್ನು ಹೊರತುಪಡಿಸಿ, ಹೆಚ್ಚುವರಿಯಾಗಿ ರೂ.25.00 ಕೋಟಿಗಳನ್ನು "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ"ಯಡಿ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ / ಆದೇಶಕ್ಕೆ ಕಡತ ಸಲ್ಲಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ, ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆಯಲಾಗಿರುತ್ತದೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ನಅಇ 190 ಎಂಎನ್‌ವೈ 2021 (ಇ),</u>**
**<u>ಬೆಂಗಳೂರು, ದಿನಾಂಕ: 24-05-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ಅಮೃತ ನಗರೋತ್ಥಾನ ಕ್ರಿಯಾಯೋಜನೆಯಡಿ ಪ್ರಸ್ತುತ ನಿಗದಿಪಡಿಸಿರುವ ರೂ.75.00 ಕೋಟಿಗಳ ಅನುದಾನವನ್ನು ಹೊರತುಪಡಿಸಿ, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ -09ರ ವ್ಯಾಪ್ತಿಯಲ್ಲಿನ ಬಿಇಎಲ್ ಬಡಾವಣೆ, ಹೆಚ್.ಎಂ.ಟಿ ಬಡಾವಣೆ, ಡಿಫೆನ್ಸ್ ಬಡಾವಣೆ, ಎನ್.ಐ.ಟಿ ಬಡಾವಣೆ, ತಿಂಡ್ಲು, ವಿರೂಪಾಕ್ಷಪುರ ಹಾಗೂ ಇತರೆ ಬಡಾವಣೆಗಳು ಮತ್ತು ವಾರ್ಡ್-11ರ ವ್ಯಾಪ್ತಿಯಲ್ಲಿನ ಎಂ.ಎಸ್. ಪಾಳ್ಯ, ಶ್ರೀನಿಧಿ ಬಡಾವಣೆ, ಬಾಲಾಜಿ ಬಡಾವಣೆ, ವರದರಾಜನಗರ, ವಿನಾಯಕ ನಗರ, ಟೀಚರ್ಸ್ ಬಡಾವಣೆ, ಕಳತ್ತೂರು ಬಡಾವಣೆ, ಮಾರಿಯಮ್ಮ ಬ್ಲಾಕ್, ರಘುರಾಮ್ ಬಡಾವಣೆ, ಗಂಗಮ್ಮ ಬಡಾವಣೆ ಹಾಗೂ ಇತರೆ ಬಡಾವಣೆಗಳ ಚರಂಡಿ ಮತ್ತು ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಈ ಕೆಳಕಂಡ ಕಾಮಗಾರಿಗಳಿಗೆ ಹೆಚ್ಚುವರಿಯಾಗಿ ರೂ.10.00 ಕೋಟಿಗಳನ್ನು "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ" ಯಡಿ ಒದಗಿಸಲು ಈ ಕೆಳಕಂಡ ಕಾಗಾರಿಗಳ ಕ್ರಿಯಾಯೋಜನೆಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl. No. | Ward No | Name of Work | Estimate Cost (Rs. In Lakhs) |
|---|---|---|---|
| 1 | 09 | Improvements to roads, Drains and Footpath at 1st Block 5th, 6th BEL layout main road and cross roads in ward no-09 (Vidyaranyapura) | 100.00 |
| 2 | 09 | Improvements to roads, Drains and Footpath at 4th, 5th, 6th Block HMT Layout main road and Cross roads in ward no-09 (Vidyaranyapura) | 100.00 |

...5/

| | | | |
|---|---|---|---|
| 3 | 09 | Improvements to roads, drains and Footpath at at IECHS layout, Basavasamithi, Sapthagiri layout main road and Cross roads in ward no-09 | 100.00 |
| 4 | 09 | Improvements to roads and drains at Narasipura defence layout, NTI layout main road and Cross roads in ward no-09 (Vidyaranyapura) | 100.00 |
| 5 | 09 | Improvements to roads and drains at Virupakshapura, Thindlu road and Cross roads in ward no-09 (Vidyaranyapura) | 100.00 |
| 6 | 11 | Improvements to roads and drains at Mariyamma Block, Raghuram layout, Gangamma Gudi Kalathur layout and surrounding areas in ward no-11 (Kuvempunagara) | 200.00 |
| 7 | 11 | Improvements to Balance Roads and drains at MS playa Srinidhi layout, Balaji Layout Techers layout varadarajanagara, Vinayakanagara and surrounding areas in ward no-11 (Kuvempunagara) | 300.00 |
| | | **Total** | **1000.00** |

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಹೆಚ್ಚುವರಿಯಾಗಿ ರೂ10.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.10.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.

2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016, ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ

ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.

3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತ ಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.

4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.

6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡ ತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.

9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ, ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
6. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.